ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/110/ವರ್ಗಾವಣೆ/2023-2024

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ
ಆಯುಕ್ತರ ಕಛೇರಿ, ಬೆಂಗಳೂರು.
ದಿನಾಂಕ: 27-02-2024.

**ಅಧಿಕೃತ ಜ್ಞಾಪನ**

ವಿಷಯ: ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಹೊಸದಾಗಿ ಆಯ್ಕೆಗೊಂಡಿರುವ ಸಹಾಯಕ ಪ್ರಾಧ್ಯಾಪಕ ಅಭ್ಯರ್ಥಿಗಳಿಗೆ ಸ್ಥಳ ನಿಯುಕ್ತಿಗೊಳಿಸುವ ಸಂಬಂಧ, ಜಾರಿಯಲ್ಲಿರುವ ವರ್ಗಾವಣೆ ನಿಯಮಗಳನ್ವಯ ವರ್ಗಾವಣೆ ಪ್ರಕ್ರಿಯೆ ಕೈಗೊಳ್ಳುವ ಕುರಿತು.

ಉಲ್ಲೇಖ: ಅಧಿಕೃತ ಜ್ಞಾಪನ ಸಂಖ್ಯೆ ಕಾಶಿಇ/110/ವರ್ಗಾವಣೆ/2023-2024, ದಿನಾಂಕ: 27-02-2024.

** ** **

ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಹೊಸದಾಗಿ ಆಯ್ಕೆಗೊಂಡ ಸರ್ಕಾರದ ಹಂತದಲ್ಲಿ ನೇಮಕಾತಿ ಆದೇಶ ಪಡೆಯಲಿರುವ ಒಟ್ಟು 1208 ಸಹಾಯಕ ಪ್ರಾಧ್ಯಾಪಕರುಗಳಿಗೆ ಸ್ಥಳನಿಯುಕ್ತಿಗೊಳಿಸಲು ಹಾಲಿ ಜಾರಿಯಲ್ಲಿರುವ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ಸಿಬ್ಬಂದಿಗಳ ವರ್ಗಾವಣೆ) ನಿಯಮಗಳು, 2021 ರ 9 ರನ್ವಯ ವರ್ಗಾವಣೆಗೊಳಿಸುವ ಸಂಬಂಧ ಉಲ್ಲೇಖಿತ ಅಧಿಕೃತ ಜ್ಞಾಪನವನ್ನು ಜಾರಿಗೊಳಿಸಲಾಗಿರುತ್ತದೆ. ಉಲ್ಲೇಖಿತ ಜ್ಞಾಪನದಲ್ಲಿ ವರ್ಗಾವಣೆಗೆ ಒಳಪಡುವ ಅಧ್ಯಾಪಕರಿಂದ ವಿಶೇಷ ಪ್ರಕರಣಗಳಡಿಯಲ್ಲಿ ಸೌಲಭ್ಯ ಪಡೆಯಲು ಇಎಂಐಎಸ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ಹಾಗೂ ಇ-ಮೇಲ್ ಮೂಲಕ ಸಲಹೆ ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ತಿಳಿಸಲಾಗಿತ್ತು.

ಈಗಾಗಲೇ ಸ್ವೀಕರಿಸಲಾದ ಆಕ್ಷೇಪಣೆಗಳನ್ನು ಪರಿಶೀಲಿಸಲಾಗಿ, ವಿಶೇಷ ಪ್ರಕರಣಗಳಡಿ ಅರ್ಜಿ ಸಲ್ಲಿಸಲು ಅವಶ್ಯವಿರುವ ದಾಖಲೆಗಳು/ಪ್ರಮಾಣ ಪತ್ರಗಳನ್ನು ಪಡೆದು ಆನ್‌ಲೈನ್ ಮೂಲಕ ಸಲ್ಲಿಸಲು ಕನಿಷ್ಠ 10 ದಿನಗಳ ಕಾಲಾವಕಾಶದ ಅವಶ್ಯವಿರುವುದಾಗಿ ತಿಳಿಸಿರುತ್ತಾರೆ. ಮುಂದುವರೆದು ತಾತ್ಕಾಲಿಕ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ಸಹ ಹೆಚ್ಚಿನ ಸಮಯಾವಕಾಶ ಕೋರಿರುತ್ತಾರೆ. ಈ ಹಿನ್ನೆಲೆಯಲ್ಲಿ ಉಲ್ಲೇಖಿತ ಜ್ಞಾಪನದಲ್ಲಿ ನಿಗಧಿಪಡಿಸಿದ್ದ ವರ್ಗಾವಣೆ ವೇಳಾಪಟ್ಟಿಯನ್ನು ಈ ಕೆಳಕಂಡಂತೆ ಪರಿಷ್ಕರಿಸಲಾಗಿದೆ,

<table>
<tr><td>1</td><td>Provisional List of Incumbent Faculty to be Transferred</td><td colspan="3">28th February, 2024</td></tr>
<tr><td>2</td><td>Call of Applications for Claiming Special Category Status from Incumbent Faculty</td><td colspan="3">28h February, 2024 to 09th March, 2024</td></tr>
<tr><td>3</td><td>Notification of Provisional Priority List for Counselling</td><td colspan="3">13th March 2024</td></tr>
<tr><td>4</td><td>Call for Objections to Provisional Priority List for Counselling</td><td colspan="3">13th March 2024 to 18th March 2024</td></tr>
<tr><td>5</td><td>Notification of<br>Final Priority List for Counselling for Incumbent Faculty</td><td colspan="3">20th March 2024</td></tr>
<tr><td rowspan="2">6</td><td rowspan="2">Online Counselling</td><td colspan="3">Transfer of INCUMBENT Faculty</td></tr>
<tr><td>Stream I:<br>21st to 25th of March 2024</td><td>Stream II:<br>21st to 25th of March 2024</td><td>Stream III:<br>21st to 25th of March 2024</td></tr>
</table>

ಮೇಲ್ಕಂಡ ವೇಳಾಪಟ್ಟಿಯನ್ನು ಹೊರತುಪಡಿಸಿ, ಉಲ್ಲೇಖಿತ ಅಧಿಕೃತ ಜ್ಞಾಪನದಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ ಹಾಗೂ ಹೊಸದಾಗಿ ನೇಮಕಗೊಂಡ ಸಹಾಯಕ ಪ್ರಾಧ್ಯಾಪಕರುಗಳ ಸ್ಥಳನಿಯುಕ್ತಿಗೆ ಸಂಬಂಧಿಸಿದಂತೆ ಪ್ರತ್ಯೇಕ ವೇಳಾಪಟ್ಟಿಯನ್ನು ಪ್ರಕಟಿಸಲಾಗುವುದು.

*(ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟಿದೆ)*

27/2/24

**ಮುಖ್ಯ ಆಡಳಿತಾಧಿಕಾರಿಗಳು**
**ಕಾಲೇಜು ಶಿಕ್ಷಣ ಇಲಾಖೆ**

ಪ್ರತಿಯನ್ನು:

1. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಬೋಧಕರುಗಳಿಗೆ - ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಹಾಗೂ ಕಲಬುರಗಿ-ಮಾಹಿತಿಗಾಗಿ.
3. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
4. ರಕ್ಷಾ ಕಡತ.
5. ಕಛೇರಿ ಪ್ರತಿ.